ಶಿಕ್ಷಣದಿಂದ ಶ್ರೇಷ್ಠತೆ

# ಎಸ್.ಬಿ.ಆರ್.ಆರ್. ಮಹಾಜನ ಪ್ರಥಮದರ್ಜೆಕಾಲೇಜು (ಸ್ವಾಯತ್ತ)


ಜಯಲಕ್ಷ್ಮೀಪುರಂ, ಮೈಸೂರು- 570 012

ಮೈಸೂರು ವಿಶ್ವವಿದ್ಯಾನಿಲಯದ ಸಂಯೋಜನೆ ಹಾಗೂ ನ್ಯಾಕ್‌ನಿಂದ 'ಎ' ಶ್ರೇಣಿಯ ಮಾನ್ಯತೆ ಪಡೆದಿದೆ

ಶ್ರೇಷ್ಠತೆಯ ಸಾಮರ್ಥ್ಯವಿರುವಕಾಲೇಜು


---

ದಿನಾಂಕ 23.02.2020

## ಪ್ರಕಟಣೆಯ ಕೃಪೆಗಾಗಿ

ಮೈಸೂರು ಜಯಲಕ್ಷ್ಮೀಪುರಂನಲ್ಲಿರುವ ಪ್ರತಿಷ್ಠಿತ ಎಸ್‌ಬಿಆರ್‌ಆರ್ ಮಹಾಜನ ಕಾಲೇಜಿನ ವತಿಯಿಂದ **'ವಿದ್ಯಾರ್ಥಿ ಸಂಸತ್ ಮತ್ತು ಪ್ರತಿಭಾ ವೇದಿಕೆಯ ಸಮಾರೋಪ ಸಮಾರಂಭ' ('ಪ್ರತಿಭಾ ಪುರಸ್ಕಾರ' ಮತ್ತು 'ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ')** ವನ್ನು **ದಿನಾಂಕ 25ನೇ ಫೆಬ್ರವರಿ, 2020, ಮಂಗಳವಾರದಂದು ಕಾಲೇಜಿನ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಸಭಾಂಗಣದಲ್ಲಿ ಬೆಳಿಗ್ಗೆ 11.30 ಗಂಟೆಗೆ** ಆಯೋಜಿಸಲಾಗಿದೆ.

ಈ ಕಾರ್ಯಕ್ರಮದ ಸಮಾರೋಪ ಸಮಾರಂಭ ಭಾಷಣವನ್ನು ನಾಡಿನ ಶ್ರೇಷ್ಠ ವಿಮರ್ಶಕರು ಹಾಗೂ ಚಿಂತಕರು ಆದ ಡಾ. ನರಹಳ್ಳಿ ಬಾಲಸುಬ್ರಹ್ಮಣ್ಯ ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮೈಸೂರು ನಗರಪಾಲಿಕೆಯ ನಗರ ಮತ್ತು ರಾಷ್ಟ್ರೀಯ ಯೋಜನೆಯ ಜಂಟಿ ನಿರ್ದೇಶಕರು ಹಾಗೂ ನಗರ ಯೋಜನಾಧಿಕಾರಿಗಳಾದ ಶ್ರೀ ಜಿ. ಎಸ್. ಜಯಸಿಂಹರವರು ವಹಿಸಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಅಂತಿಮ ಬಿ.ಎ., ವಿದ್ಯಾರ್ಥಿ ಹಾಗೂ 2020 ವರ್ಷದ ವಿದ್ಯಾರ್ಥಿ ಸಂಸದ ಶ್ರೀ. ರವಿಶಂಕರ್ ಎಸ್. ವಹಿಸಲಿದ್ದಾರೆ.

ಕಾರ್ಯಕ್ರದಲ್ಲಿ ಮಹಾಜನ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಶ್ರೀ ಟಿ. ಮುರಳೀಧರ್ ಭಾಗವತ್, ಮಹಾಜನ ವಿದ್ಯಾಸಂಸ್ಥೆಯ ಗೌ. ಕಾರ್ಯದರ್ಶಿಗಳಾದ ಡಾ. ಟಿ. ವಿಜಯಲಕ್ಷ್ಮೀ ಮುರಳೀಧರ್, ಮಹಾಜನ ವಿದ್ಯಾಸಂಸ್ಥೆಯ ಆಡಳಿತಾಧಿಕಾರಿಗಳಾದ ಪ್ರೊ. ಪಿ. ಸರೋಜಮ್ಮ, ಮತ್ತು ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಶೈಕ್ಷಣಿಕ ಸಲಹೆಗಾರರಾದ ಡಾ. ಎಸ್. ಆರ್. ರಮೇಶ್‌ರವರು ಉಪಸ್ಥಿತರಿರುತ್ತಾರೆ.

ಸಮಾರಂಭದಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ದತ್ತಿ ಪುರಸ್ಕಾರ ಹಾಗೂ ಪ್ರಶಸ್ತಿ ಫಲಕಗಳನ್ನು ನೀಡಲಾಗುವುದು ಮತ್ತು ಕಾಲೇಜಿನ ಸಾಂಸ್ಕೃತಿಕ, ಸಾಹಿತ್ಯಕ ಮತ್ತು ಕ್ರೀಡಾ ಚಟುವಟಿಕೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಗುವುದು. ವೇದಿಕೆಯ ಸಮಾರಂಭದ ನಂತರ ಮಧ್ಯಾಹ್ನ 1.00 ಗಂಟೆಗೆ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಕಾಲೇಜಿನ ಪ್ರಾಚಾರ್ಯರಾದ ಡಾ. ಎಸ್. ವೆಂಕಟರಾಮು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

(ಡಾ. ಎಸ್. ವೆಂಕಟರಾಮು)

ಪ್ರಾಂಶುಪಾಲರು